| | | | | | |
|---|---|---|---|---|---|
| 23 | ಬೈಲಹೊಂಗಲ | 2 | 3 | 13 | 36 |
| 24 | ನೇಸರಗಿ | 1 | 3 | 8 | 18 |
| 25 | ಕಿತ್ತೂರು | 1 | 4 | 9 | 22 |
| 26 | ದೊಡವಾಡ | 1 | 3 | 7 | 22 |
| 27 | ರಾಮದುರ್ಗ | 2 | 4 | 12 | 25 |
| 28 | ಕಟಕೋಳ | 1 | 3 | 7 | 19 |
| 29 | ಸವದತ್ತಿ | 2 | 6 | 14 | 35 |
| 30 | ಮುರಗೋಡ | 1 | 4 | 9 | 22 |
| **ಒಟ್ಟು** | | **40** | **104** | **296** | **745** |

ಈ) ಬೆಳಗಾವಿ ಜಿಲ್ಲೆ ಅಥಣಿ ತಾಲ್ಲೂಕಿನಲ್ಲಿ ಹೊಸದಾಗಿ ಪೊಲೀಸ್ ಠಾಣೆಯನ್ನು ತೆರೆಯುವ ಕುರಿತು ರಾಷ್ಟ್ರೀಯ ಪೊಲೀಸ್ ಆಯೋಗದ ಮಾನದಂಡದನ್ವಯ ಹಾಗೂ ಆದ್ಯತೆ ಮತ್ತು ಆಯವ್ಯಯ ಲಭ್ಯತೆಗನುಗುಣವಾಗಿ ಪರಿಶೀಲಿಸಿ ಕ್ರಮಕ್ಕೈಗೊಳ್ಳಲಾಗುವುದು.

ಈಗಾಗಲೇ ಚಿಕ್ಕೋಡಿ ಪೊಲೀಸ್ ಉಪ ವಿಭಾಗದಿಂದ ಅಥಣಿಯನ್ನು ಪ್ರತ್ಯೇಕಿಸಿ ಹೊಸದಾಗಿ ಅಥಣಿಗೆ ಹೊಸ ಪೊಲೀಸ್ ಉಪ ವಿಭಾಗವನ್ನು ಪ್ರಾರಂಭಿಸಲು ಸರ್ಕಾರವು ತೀರ್ಮಾನಿಸಿದ್ದು ಶೀಘ್ರದಲ್ಲಿಯೇ ಆದೇಶ ಹೊರಡಿಸಲಾಗುವುದು.

**ಪೊಲೀಸ್ ವಸತಿ ಗೃಹಗಳು**

**1226(1304); ಶ್ರೀ ಲಕ್ಷ್ಮಣ ಸಂಗಪ್ಪ ಸವದಿ (ಅಥಣಿ)**

ಅ) ಬೆಳಗಾವಿ ಜಿಲ್ಲೆ, ಅಥಣಿ ತಾಲ್ಲೂಕಿನಲ್ಲಿ ಪೊಲೀಸ್ ವಸತಿಗೃಹಗಳ ನಿರ್ಮಾಣ ಮಾಡುವ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಬಂದಿದ್ದಲ್ಲಿ, ಯಾವಾಗ ವಸತಿಗೃಹಗಳನ್ನು ನಿರ್ಮಾಣ ಮಾಡಲಾಗುವುದು; (ಸಂಪೂರ್ಣ ಮಾಹಿತಿ ನೀಡುವುದು)?

**ಶ್ರೀ ಕೆ.ಜೆ. ಜಾರ್ಜ್ (ಮಾನ್ಯ ಗೃಹ ಸಚಿವರು)**

ಅ) ಸರ್ಕಾರದ ಆದೇಶ ಸಂಖ್ಯೆ:ಹೆಚ್‌ಡಿ/70/ಪಿಬಿಎಲ್/2013, ದಿನಾಂಕ: 22–11–2013 ರಲ್ಲಿ ಆಡಳಿತಾತ್ಮಕ ಅನುಮೋದನೆ ದೊರೆತಿರುವ ಮೇರೆಗೆ ಪೊಲೀಸ್ ಗೃಹ 2020 ಯೋಜನೆಯಡಿ ಬೆಳಗಾವಿ ಜಿಲ್ಲೆಯಲ್ಲಿ ಒಟ್ಟು 264–ಪಿಸಿ ಮತ್ತು 14–ಪಿಎಸ್‌ಐ ವಸತಿಗೃಹಗಳನ್ನು ನಿರ್ಮಾಣ ಮಾಡಲು ಉದ್ದೇಶಿಸಲಾಗಿದೆ. ಇದರಲ್ಲಿ ಅಥಣಿ ತಾಲ್ಲೂಕಿನ ಅಥಣಿ ಪೊಲೀಸ್ ಠಾಣೆಯ ವ್ಯಾಪ್ತಿಯಲ್ಲಿ 12 ಪೊಲೀಸ್ ವಸತಿಗೃಹಗಳನ್ನು ನಿರ್ಮಿಸಲು ಕ್ರಮಕೈಗೊಳ್ಳಲಾಗಿದೆ.

ಆ) ಪೊಲೀಸ್ ಗೃಹ 2020 ಯೋಜನೆಯಡಿಯಲ್ಲಿ ಬೆಳಗಾವಿ ಜಿಲ್ಲೆ ಅಥಣಿಯಲ್ಲಿ 12 ಪೊಲೀಸ್ ವಸತಿಗೃಹಗಳನ್ನು ನಿರ್ಮಿಸಲು ಟೆಂಡರ್ ಪ್ರಕ್ರಿಯೆಯಲ್ಲಿದ್ದು, ಟೆಂಡರ್ ಪ್ರಕ್ರಿಯೆ ಅಂತಿಮಗೊಂಡ ನಂತರ ವಸತಿಗೃಹಗಳ ನಿರ್ಮಾಣ ಕಾಮಗಾರಿಯನ್ನು ಪ್ರಾರಂಭ ಮಾಡಲಾಗುವುದು.

**ಹೊಸ ಪೊಲೀಸ್ ಠಾಣೆ ಸ್ಥಾಪನೆ**

**1227(1305); ಶ್ರೀ ಲಕ್ಷ್ಮಣ ಸಂಗಪ್ಪ ಸವದಿ (ಅಥಣಿ)**

ಅ) ಬೆಳಗಾವಿ ಜಿಲ್ಲೆ ಅಥಣಿ ವಿಧಾನ ಸಭಾ ಕ್ಷೇತ್ರ ಬೃಹತ್ ಗಾತ್ರದಲ್ಲಿ ಬೆಳೆಯುತ್ತಿದ್ದು, ಹೆಚ್ಚಿನ ಜನಸಂಖ್ಯೆಯಿರುವ ಈ ಭಾಗದಲ್ಲಿ ಹೊಸ ಪೊಲೀಸ್ ಠಾಣೆ ಸ್ಥಾಪಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಆ) ಹಾಗಿದ್ದಲ್ಲಿ, ಯಾವಾಗ ಪೊಲೀಸ್ ಠಾಣೆಯನ್ನು ಸ್ಥಾಪಿಸಲಾಗುವುದು; (ವಿವರ ನೀಡುವುದು);